ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 465 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:17-12-2020.

## ಆದೇಶ

1) ಭಾರತ ಸರ್ಕಾರದ ಕೇಂದ್ರ ಗೃಹ ಮಂತ್ರಾಲಯವು ಆದೇಶ ಸಂಖ್ಯೆ: 40-3/2020-ಡಿಎಂ-I(ಎ) ದಿನಾಂಕ:25.11.2020ರಲ್ಲಿ ಕೋವಿಡ್-19ರ ನಿಗಾವಣೆ ನಿಯಂತ್ರಣ ಮತ್ತು ಜಾಗ್ರತೆಗೆ ಸಂಬಂಧಿಸಿದ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ದಿನಾಂಕ:31.12.2020ರವರೆಗೆ ಜಾರಿಯಾಲ್ಲಿರುತ್ತದೆ.

2) ಅದರನ್ವಯ, ರಾಜ್ಯ ಸರ್ಕಾರವು ಆದೇಶ ಸಂಖ್ಯೆ:ಕಂಇ 158 ಟಿಎನ್‌ಆರ್ 2020, ದಿನಾಂಕ:27.11.2020ರಲ್ಲಿ ಕೇಂದ್ರ ಸರ್ಕಾರದ ಆದೇಶವನ್ನು ಯಥಾವತ್ತಾಗಿ ಜಾರಿಗೊಳಿಸಿದೆ.

3) ರಾಜ್ಯದಲ್ಲಿ ಕೋವಿಡ್-19 ಸೋಂಕು ಹರಡಿದ್ದು, ಈ ಸೋಂಕನ್ನು ನಿಯಂತ್ರಿಸಲು ರಾಜ್ಯ ಸರ್ಕಾರವು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಂಡಿದೆ. ಕೋವಿಡ್-19 ಸೋಂಕು ಹರಡುವಿಕೆಯನ್ನು ನಿಯಂತ್ರಿಸುವ ಸಂಬಂಧದಲ್ಲಿ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕಾದ ಅನಿವಾರ್ಯತೆ ಮತ್ತು ಅವಶ್ಯಕತೆ ಕಂಡುಬಂದು ಇಂತಹ ಪರಿಸ್ಥಿತಿಯಲ್ಲಿ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಕ್ರಿಸ್‌ಮಸ್ ಹಬ್ಬ ಹಾಗೂ ಹೊಸವರ್ಷದ ಸಂಭ್ರಮಾಚರಣೆಯನ್ನು ಸರಳವಾಗಿ, ಭಕ್ತಿಪೂರ್ವಕವಾಗಿ ಮತ್ತು ಅರ್ಥಗರ್ಭಿತವಾಗಿ ಆಚರಿಸುವ ಅವಶ್ಯಕತೆ ಇದೆ. ಈ ಸಂದರ್ಭದಲ್ಲಿ ರಾಜ್ಯದಾದ್ಯಂತ ಸಾಮಾಜಿಕ ಅಂತರವಿಲ್ಲದೇ ಹೆಚ್ಚಿನ ಜನರು ಸೇರುವ ಸಾಮೂಹಿಕ ಕೂಟ (Party)ಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ಮತ್ತು ಹೆಚ್ಚು ಜನಸಂಖ್ಯೆಯುಳ್ಳ ವಸತಿ ಸಮುಚ್ಚಯಗಳಲ್ಲಿ ಹಾಗೂ ಜನ ಸೇರತಕ್ಕಂತ ಸ್ಥಳಗಳಲ್ಲಿ ಆಯೋಜಿಸುವುದನ್ನು ನಿಷೇಧಿಸಲಾಗಿದೆ. ಅಲ್ಲದೇ, ಆಚರಣೆಯಲ್ಲಿ ಹಸಿರು ಪಟಾಕಿಗಳನ್ನು ಮಾತ್ರ ಹಚ್ಚಲು ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ:ಕಂಇ 465 ಟಿಎನ್‌ಆರ್ 2020, ದಿನಾಂಕ:06.11.2020 ಮತ್ತು ದಿನಾಂಕ:13.11.2020ರಲ್ಲಿನ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

4) ಈ ಹಿನ್ನೆಲೆಯಲ್ಲಿ, ವಿಪತ್ತು ನಿರ್ವಹಣಾ ಅಧಿನಿಯಮ, 2005ರ ಪ್ರಕರಣ 24ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷನಾಗಿ ಈ ಕೆಳಗೆ ಸಹಿ ಮಾಡಿರುವ ನಾನು ಅನುಬಂಧದಲ್ಲಿರುವಂತೆ ಮಾರ್ಗಸೂಚಿಗಳನ್ನು ಹೊರಡಿಸಿರುತ್ತೇನೆ. ಈ ಮಾರ್ಗಸೂಚಿಗಳು ದಿನಾಂಕ:20.12.2020 ರಿಂದ ದಿನಾಂಕ:02.01.2021ರವರೆಗೆ ಚಾಲ್ತಿಯಲ್ಲಿರುತ್ತವೆ. ಈ ಮಾರ್ಗಸೂಚಿಗಳನ್ನು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು, ಪೊಲೀಸ್ ಆಯುಕ್ತರುಗಳು, ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳು, ಇಲಾಖಾ ಮುಖ್ಯಸ್ಥರುಗಳು ಮತ್ತು ಪ್ರಾಧಿಕಾರಗಳು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸತಕ್ಕದ್ದು.

ಟಿ.ಎಂ.ವಿಜಯಭಾಸ್ಕರ್ 17/12/20
(ಟಿ.ಎಂ. ವಿಜಯ್ ಭಾಸ್ಕರ್)
ಮುಖ್ಯ ಕಾರ್ಯದರ್ಶಿ ಹಾಗೂ
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ
ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರು

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿ 465 ಟಿಎನ್‌ಆರ್ 2020, ದಿ:17-12-2020ರ ಅನುಬಂಧ ಕ್ರಿಸ್‌ಮಸ್ ಹಾಗೂ ಹೊಸ ವರ್ಷ ಆಚರಣೆ ಸಂಬಂಧವಾಗಿ ಮಾರ್ಗಸೂಚಿಗಳು

1. ಕ್ರೈಸ್ತ ಧರ್ಮದ ಚರ್ಚ್‌ಗಳಲ್ಲಿ ಒಮ್ಮೆಲೆ ಹೆಚ್ಚು ಜನರು ಸೇರದಂತೆ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳಲು ಮೇಲ್ವಿಚಾರಕರು/ಆಯೋಜಕರು ಕಟ್ಟುನಿಟ್ಟಿನ ಕ್ರಮ ವಹಿಸತಕ್ಕದ್ದು.
2. ಹಬ್ಬದ ಆಚರಣೆಯ ಸಂದರ್ಭದಲ್ಲಿ ಕೋವಿಡ್-19 ಸಾಂಕ್ರಾಮಿಕ ಸೋಂಕು ತಡೆಗಟ್ಟಲು ಸಾರ್ವಜನಿಕರ ಹಸ್ತಲಾಘವ ಮತ್ತು ಆಲಿಂಗನವನ್ನು ನಿಷೇಧಿಸಿದೆ.
3. ದಿನಾಂಕ 30.12.2020 ರಿಂದ 02.01.2021ರವರೆಗೆ ಕ್ಲಬ್/ಪಬ್/ರೆಸ್ಟೋರೆಂಟ್ ಹಾಗೂ ಅದೇ ತೆರನಾದ ಸ್ಥಳ/ಪ್ರದೇಶಗಳಲ್ಲಿ ಸಾಮಾಜಿಕ ಅಂತರವಿಲ್ಲದೇ ಹೆಚ್ಚು ಜನರು ಸೇರುವ ವಿಶೇಷ ಯೋಜಿತ ಒಟ್ಟುಗೂಡುವಿಕೆ, ವಿಶೇಷ ಡಿಜೆ-ಡಾನ್ಸ್ ಕಾರ್ಯಕ್ರಮಗಳನ್ನು, ವಿಶೇಷ ಪಾರ್ಟಿ, ಇತ್ಯಾದಿ ನಿಷೇಧಿಸಿದೆ. ಆದರೆ, ಕ್ಲಬ್/ ಪಬ್/ ರೆಸ್ಟೋರೆಂಟಗಳನ್ನು ಪ್ರತಿನಿತ್ಯದಂತೆ ತೆರೆದಿದ್ದು, ನಡೆಸಲು ನಿರ್ಬಂಧವಿಲ್ಲ.
4. ಹೊಸ ವರ್ಷಾಚರಣೆ ಸಂಬಂಧದಲ್ಲಿ, ಸಾರ್ವಜನಿಕ ಸ್ಥಳಗಳಲ್ಲಿ, ಮುಖ್ಯ ರಸ್ತೆಗಳಲ್ಲಿ ಮತ್ತು ಸಾಮಾಜಿಕ ಅಂತರವಿಲ್ಲದೆ ಹೆಚ್ಚಿನ ಸಂಖ್ಯೆಯಲ್ಲಿ ಜನರ ಸೇರುವಿಕೆಯನ್ನು ಹಾಗೂ ಸಂಭ್ರಮಾಚರಣೆಯನ್ನು ನಿಷೇಧಿಸಿದೆ. ಆದರೆ, ಈ ಸ್ಥಳಗಳಲ್ಲಿ ಪ್ರತಿನಿತ್ಯದ ಸಾಮಾನ್ಯ ಕಾರ್ಯಚಟುವಟಿಕೆಗಳನ್ನು ಕೈಗೊಳ್ಳಲು ನಿರ್ಬಂಧವಿಲ್ಲ.
5. ಆಯ್ದ ರಸ್ತೆ ಸ್ಥಳಗಳಿಗೆ ಸಂಬಂಧಿಸಿದಂತೆ, ಸ್ಥಳೀಯ ಪೊಲೀಸ್ ಆಯುಕ್ತರು, ಜಿಲ್ಲಾಧಿಕಾರಿಗಳು ಹೆಚ್ಚಿನ ನಿರ್ಬಂಧಗಳನ್ನು ವಿಧಿಸಬಹುದು.
6. ಸರ್ಕಾರದ ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:27.11.2020ರಲ್ಲಿನ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ಅದರಂತೆ ಬಹು ಮುಖ್ಯವಾಗಿ 65ವರ್ಷದ ಮೇಲ್ಪಟ್ಟ ಹಿರಿಯರು ಮತ್ತು 10ವರ್ಷದೊಳಗಿನ ಮಕ್ಕಳು ಮನೆಯಲ್ಲಿಯೇ ಇರತಕ್ಕದ್ದು, ಸಾರ್ವಜನಿಕ ಸ್ಥಳಗಳಲ್ಲಿ ಮಾಸ್ಕ್ ಧರಿಸುವುದು ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವುದು ಮತ್ತು ಹೋಟೆಲ್‌ಗಳು/ಮಾಲ್‌ಗಳು/ ಪಬ್/ ರೆಸ್ಟೋರೆಂಟ್‌ಗಳು ಹಾಗೂ ಅಂತಹ ಪ್ರದೇಶಗಳಲ್ಲಿ ಥರ್ಮಲ್ ಸ್ಕ್ರೀನಿಂಗ್ ಹಾಗೂ ಸ್ಯಾನಿಟೈಸರ್ ವ್ಯವಸ್ಥೆಯನ್ನು ಕಡ್ಡಾಯವಾಗಿ ಇರಿಸತಕ್ಕದ್ದು.
7. ಹೋಟೆಲ್‌ಗಳು/ಮಾಲ್‌ಗಳು/ಪಬ್/ರೆಸ್ಟೋರೆಂಟ್‌ಗಳು ಹಾಗೂ ಅಂತಹ ಸ್ಥಳ/ಪ್ರದೇಶಗಳಲ್ಲಿ ಅದರ ಮಾಲೀಕರು ಕಡ್ಡಾಯವಾಗಿ ಸರ್ಕಾರದ ಆದೇಶದಂತೆ ಕೋವಿಡ್-19ರ ನಿಯಂತ್ರಣಕ್ಕಾಗಿ ಸಾಮಾಜಿಕ ಅಂತರದಿಂದ ಜನರು ಸೇರಲು ಜಾಗ್ರತೆ ವಹಿಸುವುದು. ಅಗತ್ಯವಿದ್ದಲ್ಲಿ, ಜನರನ್ನು ಸರದಿಯಲ್ಲಿ ಪ್ರವೇಶಿಸಲು ಅಥವಾ ಆನ್‌ಲೈನ್ ಮುಖಾಂತರ/ಟೋಕನ್ ಪದ್ಧತಿಯಲ್ಲಿ ಸ್ಥಳ ಕಾಯ್ದಿರಿಸಲು (Pre-Booking) ವ್ಯವಸ್ಥೆಯನ್ನು ಕಲ್ಪಿಸುವುದು.
8. ಪ್ರಾಂಗಣಗಳಲ್ಲಿ, ಉಪಹಾರ ಸ್ಥಳಗಳಲ್ಲಿ, ವ್ಯವಸ್ಥಿತ ಕಟ್ಟಡ ಸಮುಚ್ಚಯಗಳಲ್ಲಿ ಜನರು ಕಡ್ಡಾಯವಾಗಿ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳಲು ವ್ಯವಸ್ಥೆ ಕಲ್ಪಿಸತಕ್ಕದ್ದು.
9. ಸರ್ಕಾರದ ಮಾರ್ಗಸೂಚಿಯಂತೆ ಕಡ್ಡಾಯವಾಗಿ ಹಸಿರು ಪಟಾಕಿಗಳನ್ನು ಮಾತ್ರ ಹಚ್ಚತಕ್ಕದ್ದು.
10. ಕೋವಿಡ್-19 ಸಾಂಕ್ರಾಮಿಕ ಸೋಂಕು ಹರಡುವಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ರಾಷ್ಟ್ರೀಯ ನಿರ್ದೇಶನಗಳನ್ನು ಹಾಗೂ ರಾಜ್ಯ ಸರ್ಕಾರವು ಹೊರಡಿಸಿದ ಮಾರ್ಗಸೂಚಿಗಳನ್ನು ಸಂಬಂಧಪಟ್ಟ ಪ್ರಾಧಿಕಾರಗಳು ತಪ್ಪದೇ ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು. ಅಲ್ಲದೇ, ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಆರೋಗ್ಯ ಇಲಾಖೆ, ಪೊಲೀಸ್ ಇಲಾಖೆ, ಮಹಾನಗರ ಪಾಲಿಕೆ, ಮಾಲಿನ್ಯ ನಿಯಂತ್ರಣ ಮಂಡಳಿ, ಅಗ್ನಿಶಾಮಕ ಇಲಾಖೆ, ಜಿಲ್ಲಾಡಳಿತ ಹಾಗೂ ಇತರೆ ಇಲಾಖೆ/ಕಾರ್ಪೋರೇಷನ್/ಪ್ರಾಧಿಕಾರಗಳಿಂದ ಹೊರಡಿಸಲಾದ ಸೂಚನೆ ಹಾಗೂ ಮಾರ್ಗಸೂಚಿಗಳನ್ನು ಸಹ ಕಡ್ಡಾಯವಾಗಿ ಪಾಲಿಸತಕ್ಕದ್ದು.
11. ರಾಷ್ಟ್ರೀಯ ನಿರ್ದೇಶನಗಳನ್ನು ಹಾಗೂ ರಾಜ್ಯ ಸರ್ಕಾರದ ಆದೇಶ / ಮಾರ್ಗಸೂಚಿಗಳನ್ನು ಉಲ್ಲಂಘಿಸುವವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ, 2005 ಹಾಗೂ ಭಾರತೀಯ ದಂಡ ಸಂಹಿತೆ ಸೆಕ್ಷನ್ 188ರ ಅಡಿಯಲ್ಲಿ ಶಿಸ್ತಿನ/ಕಾನೂನು ಕ್ರಮ ಮತ್ತು ಅನ್ವಯವಾಗಬಹುದಾದ ಇತರೆ ಕಾನೂನು ಉಪಬಂಧಗಳ ಮೇರೆಗೆ ಕ್ರಮ ಜರುಗಿಸಲಾಗುವುದು.

ಟಿ.ಎಂ. ವಿಜಯ್ ಭಾಸ್ಕರ್ 17/12/20
(ಟಿ.ಎಂ. ವಿಜಯ್ ಭಾಸ್ಕರ್)
ಮುಖ್ಯ ಕಾರ್ಯದರ್ಶಿ ಹಾಗೂ
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ
ಕಾರ್ಯಕಾರಿ ಸಮಿತಿ ಅಧ್ಯಕ್ಷರು